# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1. | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2147 |
| 2. | ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಐವನ್ ಡಿ'ಸೋಜಾ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು) |
| 3. | ಉತ್ತರಿಸುವ ದಿನಾಂಕ | : | 26.03.2026 |
| 4. | ಉತ್ತರಿಸುವ ಸಚಿವರು | : | ಗೃಹ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಗಾಂಜಾ ಸೇವನೆ ಮಾಡಿ ಅಪ್ರಾಪ್ತರು ಅನೇಕ ಸಮಾಜ ವಿದ್ರೋಹ ಕೆಲಸಗಳಲ್ಲಿ ತೊಡಗಿಸಿಕೊಂಡು ಅಮಾಯಕರ ಪ್ರಾಣ ಹಾನಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| (ಆ) | ಕಳೆದ ಒಂದು ವರ್ಷದಿಂದ ಇಂತಹ ಕೃತ್ಯದಿಂದ ಎಷ್ಟು ಜನ ಅಮಾಯಕರ ಪ್ರಾಣ ಹಾನಿಯಾಗಿದೆ; (ಜಿಲ್ಲಾವಾರು ವಿವರ ನೀಡುವುದು) | ರಾಜ್ಯದಲ್ಲಿ ಕಳೆದ ಒಂದು ವರ್ಷದಿಂದ ಇಂತಹ ಕೃತ್ಯದಿಂದ ಅಮಾಯಕರ ಪ್ರಾಣ ಹಾನಿಯಾಗಿರುವ ಯಾವುದೇ ಪ್ರಕರಣಗಳು ವರದಿಯಾಗಿರುವುದಿಲ್ಲ.<br>ಅಂತಹ ಪ್ರಕರಣಗಳು ಕಂಡು ಬಂದಲ್ಲಿ ಎನ್.ಡಿ.ಪಿ.ಎಸ್. ಕಾಯ್ದೆ-1985 ರಡಿಯಲ್ಲಿ ಸೂಕ್ತ ಕಾನೂನು ಕ್ರಮ ಜರುಗಿಸಲಾಗುತ್ತದೆ. |
| (ಇ) | ಅಪ್ರಾಪ್ತರು ಗಾಂಜಾ ಸೇವನೆಯಿಂದ ಇಂತಹ ಕೃತ್ಯ ಮಾಡುತ್ತಿರುವುದನ್ನು ಶಾಶ್ವತವಾಗಿ ತಪ್ಪಿಸಲು ಸರ್ಕಾರ ಯಾವ ಕಠಿಣ ಕ್ರಮ ಕೈಗೊಂಡಿದೆ? (ವಿವರ ನೀಡುವುದು) | ರಾಜ್ಯದಲ್ಲಿ ಮಾದಕ ವಸ್ತುಗಳ ಹಾವಳಿಯನ್ನು ತಡೆಗಟ್ಟಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ:-<br>➢ ಡಿಜಿ ಮತ್ತು ಐಜಿಪಿ ಕಛೇರಿ ಸ್ಥಾಯಿ ಆದೇಶ ಸಂಖ್ಯೆ: 1047 ರಲ್ಲಿ ಮಾದಕ ವಸ್ತು ಮತ್ತು ಅದರ ವ್ಯಸನದ ವಿರುದ್ಧ ಜಾಗೃತಿ ಅಭಿಯಾನಗಳನ್ನು ನಡೆಸಲು ಎಲ್ಲಾ ಘಟಕಗಳಿಗೆ ಸೂಚಿಸಲಾಗಿರುತ್ತದೆ.<br>➢ ಎನ್.ಡಿ.ಪಿ.ಎಸ್. ಕಾಯ್ದೆಯಡಿಯಲ್ಲಿ ದಾಖಲಾದ ಪ್ರಕರಣಗಳ ತನಿಖೆಯ ಸಂಬಂಧ ಸ್ಥಾಯಿ ಆದೇಶ ಸಂಖ್ಯೆ: 1048 ರಲ್ಲಿ ಎಲ್ಲಾ ತನಿಖಾಧಿಕಾರಿಗಳಿಗೆ ಅಗತ್ಯ ಕ್ರಮವಹಿಸುವಂತೆ ಸೂಚಿಸಲಾಗಿರುತ್ತದೆ.<br>➢ ಮಾದಕ ವಸ್ತು ಸೇವನೆ ಮತ್ತು ಮಾರಾಟ ಸಂಬಂಧ ಪೊಲೀಸ್ ಠಾಣಾ ಮಟ್ಟದಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಸ್ಥಾಯಿ ಆದೇಶ ಸಂಖ್ಯೆ: 1051ರಲ್ಲಿ ನಿರ್ದೇಶಗಳನ್ನು ನೀಡಲಾಗಿದೆ.<br>➢ ಮಾದಕ ದ್ರವ್ಯ ಮುಕ್ತ ಕರ್ನಾಟಕ ನಿರ್ಮಾಣ ಮಾಡುವ ನಿಟ್ಟಿನಲ್ಲಿ "ಸನ್ಮಿತ್ರ" ಉಪಕ್ರಮವನ್ನು ಪರಿಣಾಮಕಾರಿಯಾಗಿ ಅನುಷ್ಠಾನಕ್ಕೆ ತರುವ ಬಗ್ಗೆ ಸ್ಥಾಯಿ ಆದೇಶ ಸಂಖ್ಯೆ: 1052 ರಲ್ಲಿ ಮಾರ್ಗದರ್ಶನ ನೀಡಲಾಗಿದೆ.<br>➢ NDPS ಪ್ರಕರಣಗಳಲ್ಲಿನ ಆರೋಪಿಗಳ ಮಾಹಿತಿಯನ್ನು ಪೊಲೀಸ್ ಐಟಿ ತಂತ್ರಾಂಶ/ National Integrated Data |

| | | |
|---|---|---|
| | | Base on Arrested Narco Offenders (NIDAAN) ಪೋರ್ಟಲ್‌ನಲ್ಲಿ ದಾಖಲಿಸಿ ನಿರ್ವಹಿಸಲಾಗುತ್ತಿದೆ. ಆರೋಪಿಗಳ ದತ್ತಾಂಶ ವಿಶ್ಲೇಷಣೆ ಮಾಡಿ ಆರೋಪಿಗಳ ಚಲನವಲನಗಳ ಮೇಲೆ ನಿಗಾವಹಿಸಲಾಗಿದೆ.<br>➢ ರಾಜ್ಯ ಮತ್ತು ಜಿಲ್ಲಾ ಮಟ್ಟದಲ್ಲಿ NCORD (Narcotics Co-ordination) ಸಮಿತಿ ರಚನೆಗೊಂಡಿರುತ್ತದೆ. NDPS ಕಾಯ್ದೆ ಜಾರಿಗೊಳಿಸುವ ಸಂಬಂಧ ಇತರೆ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ ಕ್ರಮ ಕೈಗೊಳ್ಳಲಾಗುತ್ತಿದೆ.<br>➢ ಒಂದು ಬಾರಿಗಿಂತ ಹೆಚ್ಚು ಬಾರಿ ಎನ್.ಡಿ.ಪಿ.ಎಸ್ ಕಾಯ್ದೆ-1985 ಯಡಿ ಪ್ರಕರಣಗಳಲ್ಲಿ ಭಾಗಿಯಾದ ಅಥವಾ ರೂಢಿಗತ ಡ್ರಗ್ಸ್ ಆರೋಪಿತರಿಗೆ PIT-NDPS ಕಾಯ್ದೆ 1988 ಯಡಿಯಲ್ಲಿ ಕ್ರಮ ಜರುಗಿಸಲಾಗುತ್ತಿದೆ.<br>➢ ಎನ್.ಡಿ.ಪಿ.ಎಸ್ ಪ್ರಕರಣಗಳಲ್ಲಿ ಭಾಗಿಯಾಗುವ ವಿದೇಶಿ ಪ್ರಜೆಗಳ ವಿರುದ್ಧ ಮತ್ತು ಭಾಗಿಯಾಗುವ ಆರೋಪಿಗಳ ವಿರುದ್ಧ ಪ್ರಕರಣ ದಾಖಲಿಸಿ ಕ್ರಮ ಜರುಗಿಸಲಾಗುತ್ತಿದೆ. ಗಡಿಪಾರು ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.<br>➢ ರಾಜ್ಯದ ಯುವಕರಲ್ಲಿ ಮಾದಕ ವಸ್ತು ಬಳಕೆ ಹೆಚ್ಚುತ್ತಿರುವ ಬಗ್ಗೆ ಡ್ರಗ್ಸ್ ಹಾವಳಿಯನ್ನು ಪೂರ್ಣವಾಗಿ ತಡೆಗಟ್ಟಲು ಶಾಲಾ-ಕಾಲೇಜುಗಳಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗಿರುತ್ತದೆ.<br>➢ ಪೊಲೀಸ್ ಠಾಣೆಗಳಲ್ಲಿ ನಿಯಮಿತವಾಗಿ ಜಾಗೃತಿ ಕಾರ್ಯಕ್ರಮಗಳನ್ನು, ಶಾಲಾ-ಕಾಲೇಜುಗಳಲ್ಲಿ ಗಾಂಜಾ ಸೇವನೆಯಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ಹಾಗೂ ಗಾಂಜಾ ಬೆಳೆಯನ್ನು ಬೆಳೆಯುವುದು ಮತ್ತು ಮಾರಾಟ ಮಾಡುವುದು ಕಾನೂನಾತ್ಮಕ ಅಪರಾಧವಾಗಿರುತ್ತದೆ ಎಂಬ ಬಗ್ಗೆ ಹಾಗೂ ಅದರಿಂದಾಗುವ ಶಿಕ್ಷೆ ಬಗ್ಗೆ ಜಾಗೃತಿ ಕಾರ್ಯಕ್ರಮಗಳನ್ನು ಮಾಡಲಾಗುತ್ತಿದೆ.<br>➢ ಮಾದಕ ದ್ರವ್ಯಗಳ ಅಕ್ರಮ ಸಾಗಾಣಿಕೆ, ಮಾದಕ ದ್ರವ್ಯ ಜಾಲ ಕುರಿತು ಸ್ಥಳೀಯ ಬಾತ್ಮೀದಾರರು, ಅಪರಾಧ ವಿಭಾಗದ ಸಿಬ್ಬಂದಿಗಳು ಹಾಗೂ ಬೀಟ್ ಸಿಬ್ಬಂದಿಗಳಿಂದ ಮಾಹಿತಿ ಕಲೆ ಹಾಕಲಾಗುತ್ತಿದೆ. ಪೊಲೀಸ್ ಠಾಣೆಗಳಲ್ಲಿ ಮಾದಕ ದ್ರವ್ಯಗಳ ಅಕ್ರಮ ಸಾಗಾಣಿಕೆ ಬಗ್ಗೆ ವಿಶೇಷವಾಗಿ ಮಾಹಿತಿಯನ್ನು ಸಂಗ್ರಹಿಸಿ ಕ್ರಮ ಕೈಗೊಳ್ಳಲಾಗುತ್ತಿದೆ.<br>➢ ಮಾದಕ ವಸ್ತು ಮಾರಾಟ ಮತ್ತು ಸೇವನೆ ಮಾಡುವವರ ವಿರುದ್ಧ ದೂರು ನೀಡಲು ಟೋಲ್ ಫ್ರೀ ಸಂ: 1933 ಯೋಜನೆಯನ್ನು ಪ್ರಾರಂಭಿಸಿರುವ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಲಾಗಿರುತ್ತದೆ.<br>➢ ನಗರ ಮಟ್ಟದಲ್ಲಿ "Zero Narcotics" ಘೋಷಣೆ ಶಾಲಾ-ಕಾಲೇಜುಗಳು, PG/Hostels, ಮಾಲ್‌ಗಳ ಸುತ್ತಮುತ್ತ ನಿರಂತರ ನಿಗಾವಣೆ Special Narcotics Squad ನಿಯೋಜನೆ. |

- ಪ್ರತಿ ತಿಂಗಳು ಶಾಲಾ-ಕಾಲೇಜುಗಳಲ್ಲಿ ಮತ್ತು ಸಾರ್ವಜನಿಕ ಸ್ಥಳಗಳಿಗೆ ಭೇಟಿ ನೀಡಿ, ಮಾದಕ ವಸ್ತುಗಳ ಸೇವನೆಯಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ವಿದ್ಯಾರ್ಥಿಗಳಿಗೆ ಅರಿವು ಮೂಡಿಸಲಾಗುತ್ತಿದೆ. ಕಳೆದ 03 ವರ್ಷಗಳಲ್ಲಿ ಶಾಲಾ-ಕಾಲೇಜುಗಳಲ್ಲಿ ನಡೆಸಿದ ಜಾಗೃತಿ ಕಾರ್ಯಕ್ರಮಗಳ ವಿವರ ಈ ಕೆಳಕಂಡಂತಿದೆ:-

| ವರ್ಷ | ಒಟ್ಟು ಜಾಗೃತಿ ಕಾರ್ಯ ಕ್ರಮಗಳ ಸಂಖ್ಯೆ | ಭಾಗವಹಿಸಿದ ವಿದ್ಯಾರ್ಥಿಗಳ ಸಂಖ್ಯೆ |
|---|---|---|
| 2024 | 21852 | 1408172 |
| 2025 | 32888 | 2532811 |
| 2026<br>28.02.2026 | 3270 | 217908 |

- ಸಂಶಯಾಸ್ಪದ ಹೈಸೆಕ್ಯುರಿಟಿ ಸ್ಥಳಗಳಲ್ಲಿ ಬಿಗಿ ನಿಗಾವಣೆ, ಪಾರ್ಸಲ್ ಸರ್ವೀಸ್, ಕೊರಿಯರ್ ಸೆಂಟರ್, ರೆಸಾರ್ಟ್/ ಫಾರ್ಮ್ ಹೌಸ್‌ಗಳಿಗೆ Surprise Inspections (ದಿಢೀರ್ ಭೇಟಿ) ಕೈಗೊಂಡು ನಗರ ಹೊರವಲಯಗಳಲ್ಲಿ ಡ್ರಗ್ಸ್ ಪಾರ್ಟಿಗಳನ್ನು ತಡೆಗಟ್ಟುವ ಬಗ್ಗೆ ವಿಶೇಷ ಪೆಟ್ರೋಲಿಂಗ್ ನಡೆಸಲಾಗುತ್ತಿದೆ.
- ಪ್ರತಿ ಮಾಹೆಯಲ್ಲಿ NCORD ಸಮಿತಿ ಸಭೆಗಳನ್ನು ನಡೆಸಲು ಎಲ್ಲಾ ಘಟಕಾಧಿಕಾರಿಗಳಿಗೆ ತಿಳಿಸಲಾಗಿದೆ. ಪ್ರತಿ ವರ್ಷ ಜೂನ್ 26 ರಂದು "ಮಾದಕ ವಸ್ತುಗಳ ನಿಗ್ರಹ ದಿನ"ವನ್ನು ಆಚರಣೆ ಮಾಡಿ ಸಾರ್ವಜನಿಕರಲ್ಲಿ ಅರಿವು ಮೂಡಿಸಲಾಗುತ್ತಿದೆ.

ಒಇ 30 ಪಿಎನ್‌ಡಿ 2026

(ಡಾ. ಜಿ . ಪರಮೇಶ್ವರ)
ಗೃಹ ಸಚಿವರು